**ಓ.ಎಸ್. ನಂ. 93/2023** **ಪಿ.ಡಬ್ಲ್ಯೂ- 3**

**ಸಾಕ್ಷಿಯನ್ನು ದಿನಾಂಕ 20.9.2024 ರಂದು ಕರೆಸಿ ಪ್ರಮಾಣ ವಚನ ಬೋದಿಸಲಾಯಿತು.**

**<u>ಪಾಟೀ ಸವಾಲುಃ 1,2 6 ಮತ್ತು 7 ನೇ ಪ್ರತಿವಾದಿ ಪರ ಶ್ರೀ ಬಿ.ಎಲ್.ಟಿ ವಕೀಲರಿಂದಃ</u>**

ದಾವಾ ನಂ. ಸರ್ವೆ ನಂ. 8 ಆಗಿದ್ದು ಅದರ ವಿಸ್ತೀರ್ಣ 2 ಎಕರೆ 38 ಗುಂಟೆ ಆಗಿರುತ್ತದೆ. ದಾವಾ ಆಸ್ತಿಯ ಪಹಣಿ ಈಗ ಯಾರ ಹೆಸರಿನಲ್ಲಿ ಇರುತ್ತದೆ ಎಂದರೆ ಸಾಕ್ಷಿದಾರರು ಪ್ರತಿವಾದಿಯರು ಅಕ್ರಮವಾಗಿ ಖಾತೆ ಮಾಡಿಸಿಕೊಂಡಿರುತ್ತಾರೆ ಎನ್ನುವರು. ಪ್ರತಿವಾದಿಯರು ಕ್ರಯದ ಪ್ರಕಾರ ಖಾತೆ ಮಾಡಿಕೊಂಡಿರುತ್ತಾರೆ ಎಂದರೆ ಸಾಕ್ಷಿದಾರರು ಅಕ್ರಮ ಕ್ರಯ ಆಗಿರುತ್ತದೆ ಎನ್ನುವರು. ದಾವಾ ಆಸ್ತಿಯಲ್ಲಿ ಪೂರ್ಣ ಮನೆಗಳು ಆಗಿರುತ್ತವೆ ಎಂದರೆ ಸಾಕ್ಷಿದಾರರು ಖಾಲಿ ಜಾಗ ಇರುತ್ತದೆ ಎನ್ನುವರು. ದಾವಾ ಆಸ್ತಿಯಲ್ಲಿ 15 ರಿಂದ 20 ಮನೆಗಳು ಇರುತ್ತವೆ. ದಾವಾ ಆಸ್ತಿಯಲ್ಲಿ ಮನೆಗಳನ್ನು ಕಟ್ಟಿ ಕೊಂಡಿದ್ದು ಯಾವುದೇ ಖಾಲಿ ಜಾಗ ಇರುವುದಿಲ್ಲ ಎಂದರೆ ಸರಿಯಲ್ಲ. ಯಾವುದೇ ಕೃಷಿ ಜಮೀನು ಇರುವುದಿಲ್ಲ ಎಂದರೆ ಸಾಕ್ಷಿದಾರರು ವ್ಯವಸಾಯ ಮಾಡುತ್ತಿಲ್ಲ ಎನ್ನುವರು. ದಾವಾ ಆಸ್ತಿಯಲ್ಲಿ ಪ್ರತಿವಾದಿಯರು ಮನೆಗಳನ್ನು ಕಟ್ಟಿಕೊಂಡು ವಾಸವಾಗಿರುತ್ತಾರೆ ಎಂದರೆ ಸಾಕ್ಷಿದಾರರು ಎಲ್ಲರುಾ ಮನೆ ಕಟ್ಟಿರುವುದಿಲ್ಲ ಖಾಲಿ ಜಾಗ ಇರುತ್ತದೆ ಎನ್ನುವರು. ದಾವಾ ಆಸ್ತಿಯ ಅಕ್ಕಪಕ್ಕದಲ್ಲಿ ನನ್ನ ಜಮೀನು ಇರುವುದಿಲ್ಲ. ವಾದಿಯರು ಮೈಸೂರಿನಲ್ಲಿ ಮತ್ತು ಹೆಚ್.ಡಿ.ಕೋಟೆಯಲ್ಲಿ ವಾಸವಾಗಿರುತ್ತಾರೆ ಎನ್ನುವರು. ನನಗೆ ಸಾಕ್ಷಿ ನುಡಿಯಲು ವಾದಿ ಪರ ವಕೀಲರು ಹೇಳಿರುತ್ತಾರೆ. ದಾವಾ ಆಸ್ತಿಯು ವಾದಿಯರಿಗೆ ಸೇರಿರುವುದಿಲ್ಲ, ಅವರ ಸ್ವಾಧೀನದಲ್ಲಿ ಇರುವುದಿಲ್ಲ ಮತ್ತು ಅವರು ಮಾಲೀಕರಾಗಿರುವುದಿಲ್ಲ ಎಂದರೆ ಸರಿಯಲ್ಲ. ನನಗೂ ಮತ್ತು ಪ್ರತಿವಾದಿಯರಿಗೂ ಮನಸ್ತಾಪ ಇರುತ್ತದೆ ಎಂದರೆ ಸರಿಯಲ್ಲ. ನಾನು ಮತ್ತು ವಾದಿಯರು ಚೆನ್ನಾಗಿ ಇರುತ್ತೇವೆ ಎಂದರೆ ಎಲ್ಲರೂ ಚೆನ್ನಾಗಿ ಇರುತ್ತೇವೆ ಎನ್ನುವರು. ನನಗೆ ದಾವೆಯ ಬಗ್ಗೆ ಯಾವುದೇ ಮಾಹಿತಿ ಇರದಿದ್ದರೂ ಸಹ ವಾದಿಯರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

(ಪಾಟೀಸವಾಲುಃ 8 ರಿಂದ 12 ನೇ ಪ್ರತಿವಾದಿ ಪರ ವಕೀಲರು ಸಮಯಾವಕಾಶ ಕೋರಿದ್ದು ಯಾವುದೇ ಸಕಾರಣ ಇಲ್ಲದೇ ಇರುವುದರಿಂದ ಪಾಟೀಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.)

ಮರು ವಿಚಾರಣೆಃ ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.